ಅಡಿಕೆ ಮರ ಬಿದ್ದು ಕಾರ್ಮಿಕ ಮೃತ್ಯು

ಬೆಳ್ತಂಗಡಿ, ನ.30: ಅಡಿಕೆ ಮರ ತಲೆ ಮೇಲೆ ಬಿದ್ದ ಪರಿಣಾಮ ಕಾರ್ಮಿಕರೊಬ್ಬರು ಮೃತಪಟ್ಟ ಘಟನೆ ಇಂದಬೆಟ್ಟು ಗ್ರಾಮದ ಕುವೆತ್ಯಾರು ಎಂಬಲ್ಲಿ ಬುಧವಾರ ನಡೆದಿರುವುದು ವರದಿಯಾಗಿದೆ.

ಮೃತರನ್ನು ಮುಂಡಾಜೆ ಗ್ರಾಮದ ಕುಂಟಾಲಪಳಿಕೆ ಮಂಜುಶ್ರೀ ನಗರದ ನಿವಾಸಿ ಅಣ್ಣು ನಲ್ಕೆ (66) ಎಂದು ಗುರುತಿಸಲಾಗಿದೆ.

ಇವರು ಕುವೆತ್ಯಾರು ನಿವಾಸಿ ನವೀನ್ ಎಂಬವರ ತೋಟದಲ್ಲಿ ಕೃಷಿ ಕೆಲಸ ಮಾಡುತ್ತಿದ್ದ ವೇಳೆ, ತೋಟದ ಹಳೆಯ ಅಡಿಕೆ ಮರಗಳನ್ನು ಸೌಫಲ್ ಎಂಬವರು ಕಡಿಯುತ್ತಿದ್ದರು. ಈ ವೇಳೆ ಮರವೊಂದು ಆಕಸ್ಮಿಕವಾಗಿ ಅಣ್ಣುರವರ ತಲೆ ಮೇಲೆ ಬಿದ್ದಿದ್ದು, ಗಂಭೀರ ಗಾಯಗೊಂಡ ಅವರನ್ನು ಕೂಡಲೇ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಅದಾಗಲೇ ಅವರು ಮೃತಪಟ್ಟಿದ್ದರೆನ್ನಲಾಗಿದೆ.

ಘಟನೆಯ ಬಗ್ಗೆ ಮೃತರ ಪುತ್ರ ಅನಂತ್ ನೀಡಿರುವ ದೂರಿನಂತೆ ಬೆಳ್ತಂಗಡಿ ಪೊಲೀಸರು ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮೂಕ ಬಾಲಕಿಗೆ ಲೈಂಗಿಕ ದೌರ್ಜನ್ಯ ಪ್ರಕರಣ

ಆರೋಪಿಗೆ ಮೂರು ಜೀವಾವಧಿ ಕಠಿಣ ಶಿಕ್ಷೆ, ದಂಡ

ಕಾಸರಗೋಡು, ನ.30: ಅಪ್ರಾಪ್ತ ವಯಸ್ಸಿನ ಮೂಕಿ ಬಾಲಕಿಯನ್ನು ಕಟ್ಟಿಹಾಕಿ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಆರೋಪಿಗೆ ಮೂರು ಕಠಿಣ ಜೀವಾವಧಿ ಸಜೆ ವಿಧಿಸಿ ಕಾಸರಗೋಡು ಜಿಲ್ಲಾ ಹೆಚ್ಚುವರಿ ಪೊಕ್ಸೊ ನ್ಯಾಯಾಲಯ ಬುಧವಾರ ತೀರ್ಪು ನೀಡಿದೆ.

ಉಪ್ಪಳ ಮಣಿಮುಂಡದ ಸುರೇಶ್ (45) ಶಿಕ್ಷೆಗೊಳಗಾದ ಆರೋಪಿ.

2015ರ ಸೆ.22ರಂದು ಆರೋಪಿ ಬಾಲಕಿಯ ತಂದೆ, ತಾಯಿ ಮನೆಯಲ್ಲಿ ಇಲ್ಲದ ವೇಳೆ ಕುಡಿಯಲು ನೀರು ಕೇಳಿಕೊಂಡು ಮನೆಗೆ ಆಗಮಿಸಿದ್ದ. ಈ ವೇಳೆ ಬಾಲಕಿ ನೀರು ತರಲು ಒಳಗಡೆ ತೆರಳಿದ್ದ ಸಂದರ್ಭದಲ್ಲಿ ಆಕೆಯನ್ನು ಕಟ್ಟಿ ಹಾಕಿ ಲೈಂಗಿಕ ದೌರ್ಜನ್ಯವೆಸಗಿದ್ದನೆನ್ನಲಾಗಿದೆ.

ಈ ಬಗ್ಗೆ ಮಂಜೇಶ್ವರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ಈ ವೇಳೆ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಅ.13ರಂದು ಕ್ರೈಮ್ ಬ್ರಾಂಚ್ ಪೊಲೀಸರು ಮಂಗಳೂರಿನಿಂದ ಬಂಧಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ ಸುರೇಶ್‌ನನ್ನು ದೋಷಿ ಎಂದು ತೀರ್ಪು ನೀಡಿತ್ತು.

ಕಾಸರಗೋಡು ಜಿಲ್ಲಾ ಹೆಚ್ಚುವರಿ ಸೆಷನ್ಸ್ (ಒಂದು) ನ್ಯಾಯಾಲಯದ ನ್ಯಾಯಾಧೀಶ ಎ. ಮನೋಜ್ ಆರೋಪಿಗೆ ಮೂರು ಜೀವಾವಧಿ ಸಜೆ ಅಲ್ಲದೆ ಹೆಚ್ಚುವರಿಯಾಗಿ ಹತ್ತು ವರ್ಷ ಸಜೆ ನೀಡಿ ತೀರ್ಪು ನೀಡಿದೆ. ದಂಡ ಪಾವತಿಸದಿದ್ದಲ್ಲಿ 8 ವರ್ಷ ಹೆಚ್ಚುವರಿ ಶಿಕ್ಷೆ ಅನುಭವಿಸಬೇಕು. ಸಂತ್ರಸ್ತೆ ಬಾಲಕಿಗೆ ನಷ್ಟ ಪರಿಹಾರ ನೀಡಲು ನ್ಯಾಯಾಲಯ ನಿರ್ದೇಶನ ನೀಡಿದೆ.

ಪ್ರಾಸಿಕ್ಯೂಷನ್ ಪರ ಸ್ಪೆಷಲ್ ಪ್ರಾಸಿಕ್ಯೂಟರ್ ಪ್ರಕಾಶ್ ಅಮ್ಮಣ್ಣಾಯ ಹಾಜರಾದರು.

ಒಟ್ಟು 34 ಸಾಕ್ಷಿಗಳಲ್ಲಿ 25 ವಿಸ್ತರಿಸಲಾಗಿತ್ತು.

ಗುರುವಾಯನಕೆರೆ: ವ್ಯಕ್ತಿಯ ಮೃತದೇಹ ಕೆರೆಯಲ್ಲಿ ಪತ್ತೆ

ಸಾವಿನ ಬಗ್ಗೆ ಶಂಕೆ: ದೂರು ದಾಖಲು

ಬೆಳ್ತಂಗಡಿ, ನ.30: ಕಾರ್ಯಕ್ರಮಕ್ಕೆಂದು ತೆರಳಿದ್ದ ವ್ಯಕ್ತಿಯೋರ್ವರ ಮೃತದೇಹ ಗುರುವಾಯನಕೆರೆಯ ಕೆರೆಯಲ್ಲಿ ಬುಧವಾರ ಪತ್ತೆಯಾಗಿದ್ದು, ಇವರ ಅನುಮಾನಾಸ್ಪದ ಸಾವಿನ ಬಗ್ಗೆ ಮನೆಯವರು ನೀಡಿದ ದೂರಿನಂತೆ ಬೆಳ್ತಂಗಡಿ ಠಾಣೆಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮೃತರನ್ನು ಕುವೆಟ್ಟು ಗ್ರಾಮದ ನಿವಾಸಿ ಪ್ರವೀಣ್ ಪಿಂಟೊ (37)ಎಂದು ಗುರುತಿಸಲಾಗಿದೆ.

ಗುರುವಾಯನಕೆರೆಯಲ್ಲಿ ರಿಕ್ಷಾ ಚಾಲಕನಾಗಿ ಕೆಲಸ ಮಾಡುತ್ತಿದ್ದ ಪ್ರವೀಣ್ ಪಿಂಟೊ ಮಂಗಳವಾರ ರಾತ್ರಿ ಮನೆಯಿಂದ ಓಡಿಲ್ಲಾಳ ಗ್ರಾಮದ ಅಮರ್‌ಜಾಲ್ ಎಂಬಲ್ಲಿಗೆ ಮೆಹೆಂದಿ ಕಾರ್ಯಕ್ರಮಕ್ಕೆಂದು ಹೋಗಿದ್ದರೆನ್ನಲಾಗಿದೆ. ಪತಿ ವಾಪಸ್ ಬಾರದಿರುವುದರಿಂದ ರಾತ್ರಿ 1.39ರ ವೇಳೆ ಪತ್ನಿ ಕರೆಮಾಡಿದ್ದು ಈ ವೇಳೆ ತಾನು ಮನೆಗೆ ಬರುತ್ತೇನೆ ಎಂದು ತಿಳಿಸಿದ್ದರು. ಆದರೆ ಮನೆಗೆ ಹಿಂತಿರುಗಿರಲಿಲ್ಲವೆನ್ನಲಾಗಿದೆ. ಬುಧವಾರ ಬೆಳಗ್ಗೆ ಪ್ರವೀಣ್‌ರ ಡ್ರೈವಿಂಗ್ ಲೈಸೆನ್ಸ್ ಹಾಗೂ ದಾಖಲೆಗಳು ಕೆರೆಯ ಸಮೀಪ ಪತ್ತೆಯಾಗಿದ್ದು, ಅವರು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ತಿಳಿದು ಬಂದಿದೆ. ಪ್ರವೀಣ್‌ರ ಅಸಹಜ ಸಾವಿನ ಬಗ್ಗೆ ಹಲವಾರು ಅನುಮಾನವಿದ್ದು ಕ್ರಮ ಕೈಗೊಳ್ಳುವಂತೆ ಮೃತರ ಪತ್ನಿ ರೇಷ್ಮಾ ಬೆಳ್ತಂಗಡಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಮಾಹಿತಿ ನೀಡಿದ್ದಾರೆ.

ಈ ಬಗ್ಗೆ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಿಸಲಾಗಿದೆ.

ಮೃತದೇಹ ಮೇಲೆತ್ತಿದ ಮುಳುಗು ತಜ್ಞರು: ಗುರುವಾಯನಕೆರೆಯ ದಡದಲ್ಲಿ ರಿಕ್ಷಾ ಚಾಲಕನ ಚಪ್ಪಲಿ ಹಾಗೂ ದಾಖಲೆಗಳು ಸಿಕ್ಕಿದೆ. ವ್ಯಕ್ತಿಯೊಬ್ಬರು ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ವದಂತಿಯ ಹಿನ್ನೆಲೆಯಲ್ಲಿ ಬೆಳ್ತಂಗಡಿ ಪೊಲೀಸರು ಅಗ್ನಿ ಶಾಮಕ ದಳದವರು ಹಾಗೂ ಶೌರ್ಯ ವಿಪತ್ತು ನಿರ್ವಹಣಾ ಘಟಕದ ಸ್ವಯಂಸೇವಕರು, ಸ್ಥಳೀಯರು ಸೇರಿ ಬೆಳಗ್ಗಿನಿಂದಲೇ ಹುಡುಕಾಟ ಆರಂಭಿಸಿದ್ದರು. ಬಳಿಕ ಮಂಗಳೂರಿನಿಂದ ಮುಳುಗು ತಜ್ಞರು ಆಗಮಿಸಿ ಮಧ್ಯಾಹ್ನ ವೇಳೆ ಕೆರೆಯಿಂದ ಮೃತದೇಹವನ್ನು ಮೇಲಕ್ಕೆ ಎತ್ತಿದ್ದರು. ಮೃತರ ಮನೆಯವರು ಒಟ್ಟು ಪ್ರಕರಣದ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಮೃತದೇಹದ ಮರಣೋತ್ತರ ಪರೀಕ್ಷೆಗಾಗಿ ಮಂಗಳೂರಿನ ಆಸ್ಪತ್ರೆಗೆ ಕಳುಹಿಸಲಾಗಿದೆ.

ಆರಂಭದಲ್ಲಿ ಇದೊಂದು ಆತ್ಮಹತ್ಯೆ ಪ್ರಕರಣ ಎಂದೇ ಭಾವಿಸಲಾಗಿತ್ತು. ಆದರೆ ಇದೀಗ ಮೃತರ ಮನೆಯವರು ಹಲವಾರು ಅನುಮಾನಗಳನ್ನು ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣದ ಬಗ್ಗೆ ಸಮಗ್ರವಾದ ತನಿಖೆ ನಡೆಸುತ್ತಿದ್ದಾರೆ.

ಹೆಜಮಾಡಿ ಟೋಲ್‌ಗೆ ಸುರತ್ಕಲ್ ಸುಂಕದ ಸೇರ್ಪಡೆ ನಿಲ್ಲಿಸಿ: ಸಿಪಿಎಂ

ಉಡುಪಿ, ನ.30: ಹೆಜಮಾಡಿ ಟೋಲ್ ಶುಲ್ಕ ಹೆಚ್ಚಳ ಅಕ್ಷಮ್ಯವಾಗಿದೆ ಮತ್ತು ಇದು ಸ್ಪಷ್ಟವಾಗಿ ಲೂಟಿಕೋರ ಕಂಪೆನಿಯ ಜೊತೆಗಿನ ಸರಕಾರದ ಶಾಮೀಲಾತಿಯನ್ನು ಎತ್ತಿ ತೋರಿಸುತ್ತಿದೆ. ಆದುದರಿಂದ ಅಕ್ರಮ ಟೋಲ್ ಗೇಟ್ ಶುಲ್ಕವನ್ನು ಹೆಜಮಾಡಿ ಟೋಲ್‌ಗೇಟ್‌ಗೆ ವರ್ಗಾಯಿಸುವುದನ್ನು ನಿಲ್ಲಿಸಬೇಕು ಎಂದು ಉಡುಪಿ ಜಿಲ್ಲಾ ಸಿಪಿಐಎಂ ಒತ್ತಾಯಿಸಿದೆ.

ಶುಲ್ಕ ಹೆಚ್ಚಳ ಮಾಡಿ ಜನರ ಜೇಬಿಗೆ ಕನ್ನ ಹಾಕುವ ಸರಕಾರ ಕಾರ್ಪೊರೇಟ್ ಕಂಪೆನಿಗಳ ಲಾಭದಾಸೆಗೆ ಕುಮ್ಮಕ್ಕು ನೀಡುತ್ತಿದೆ. ಕಳೆದ ಆರು ವರ್ಷಗಳಿಂದ ನಡೆಸುತ್ತಿದ್ದ ಲೂಟಿಯನ್ನು ಮುಂದುವರಿಸಲು ದಾರಿ ಮಾಡಿಕೊಟ್ಟಿದೆ. ಉದ್ದೇಶಿತ ಶುಲ್ಕ ಹೆಚ್ಚಳದ ವಿರುದ್ಧ, ಡಿ.2ರಿಂದ ಹೆಜಮಾಡಿಯಲ್ಲಿ ಟೋಲ್ ಗೇಟ್ ವಿರೋಧಿ ಹೋರಾಟ ಸಮಿತಿ ನೇತೃತ್ವದಲ್ಲಿ ನಡೆಯಲಿರುವ ಹೋರಾಟಕ್ಕೆ ಸಿಪಿಐಎಂ ಉಡುಪಿ ಜಿಲ್ಲಾ ಸಮಿತಿ ಸಂಪೂರ್ಣ ಬೆಂಬಲವನ್ನು ವ್ಯಕ್ತ ಪಡಿಸುತ್ತದೆ ಎಂದು ಸಿಪಿಎಂ ಜಿಲ್ಲಾ ಕಾರ್ಯದರ್ಶಿ ಬಾಲಕೃಷ್ಣ ಶೆಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ದೀರ್ಘ ಹೋರಾಟದ ನಂತರ ಸುರತ್ಕಲ್ ಟೋಲ್‌ಗೇಟ್ ಮುಚ್ಚುವ ನಿರ್ಧಾರವನ್ನು ಪ್ರಕಟಿಸಿದ, ದ.ಕ. ಜಿಲ್ಲಾಧಿಕಾರಿಯವರ ತೀರ್ಮಾನ ಸ್ವಾಗತಾರ್ಹ. ಇದು ನ್ಯಾಯಕ್ಕಾಗಿ ಹೋರಾಡಿದ ಜನತೆಯ ವಿಜಯ ಎಂದು ಸಿಪಿಐಎಂ ಬಣ್ಣಿಸಿದೆ.

ದ.ಕ. ಜಿಲ್ಲಾ ರಖಂ ಮೊಟ್ಟೆ ವರ್ತಕರ ಸಂಘ (ರಿ.)
ಮೊ.ಸಂ. 7406630999
ಮೊಟ್ಟೆ ದರ 100ಕ್ಕೆ
ಲೈನ್ ಸೇಲ್ಸ್ ದರ: 590
ಸೊಸೈಟಿ ದರ: 550
ADVT

ಡಿ.3: ಯುವ ಸೌರಭ, ಸಾಂಸ್ಕೃತಿಕ ಕಾರ್ಯಕ್ರಮ

ಉಡುಪಿ, ನ.30: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಡುಪಿ ಜಿಲ್ಲೆ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು ಹೆಬ್ರಿ ಇವರ ಸಹಯೋಗದೊಂದಿಗೆ ಯುವ ಸೌರಭ-ಯುವ ಕಲಾವಿದರ ಸಾಂಸ್ಕೃತಿಕ ಕಾರ್ಯಕ್ರಮವು ಡಿ.3ರಂದು ಬೆಳಗ್ಗೆ 9:15ಕ್ಕೆ ಹೆಬ್ರಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಲಿದೆ.

ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ವಿ.ಸುನೀಲ್ ಕುಮಾರ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಹೆಬ್ರಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಪ್ರಸಾದ್‌ರಾವ್ ಎಂ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸುಗಮ ಸಂಗೀತ, ನೃತ್ಯ, ಜಾನಪದಗೀತೆ, ಪೂಜಾಕುಣಿತ, ಮಹಿಳಾ ಡೊಳ್ಳು ಕುಣಿತ ಹಾಗೂ ಕಾಲೇಜಿನ ವಿದ್ಯಾರ್ಥಿಗಳಿಂದ ಗೊಂಬೆ ಮನೆ ನಾಟಕ ಪ್ರದರ್ಶನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಪೂರ್ಣಿಮಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಉಡುಪಿ: ನಿಷೇಧಿತ ಪ್ಲಾಸ್ಟಿಕ್ ವಶ, ದಂಡ

ಉಡುಪಿ, ನ.30: ಉಡುಪಿ ನಗರಸಭಾ ವ್ಯಾಪ್ತಿಯ ದೊಡ್ಡಣಗುಡ್ಡೆ ಬಳಿ ಅಂಗಡಿಗಳಿಗೆ ನಿಷೇಧಿತ ಪ್ಲಾಸ್ಟಿಕ್‌ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದ ಇಕ್ಬಾಲ್ ಎಂಬಾತನ ವಾಹನದ ಮೇಲೆ ಇಂದು ನಗರಸಭೆ ಆರೋಗ್ಯ ಶಾಖೆಯ ಅಧಿಕಾರಿಗಳು ದಾಳಿ ನಡೆಸಿ, 75 ಕೆ.ಜಿ. ನಿಷೇಧಿತ ಪ್ಲಾಸ್ಟಿಕ್‌ಗಳನ್ನು ವಶಪಡಿಸಿಕೊಂಡು 5,000 ರೂ.ದಂಡ ವಿಧಿಸಿರುವುದಾಗಿ ವರದಿಯಾಗಿದೆ.

ಕಾರ್ಯಾಚರಣೆಯಲ್ಲಿ ನಗರಸಭೆಯ ಪರಿಸರ ಅಭಿಯಂತರರು, ಹಿರಿಯ ಆರೋಗ್ಯ ನಿರೀಕ್ಷಕರು, ಸ್ಯಾನಿಟರಿ ಸೂಪರ್‌ವೈಸರ್ ಹಾಗೂ ಪೌರಕಾರ್ಮಿಕರು ಭಾಗವಹಿಸಿದ್ದರು. ಸಾರ್ವಜನಿಕರು, ಉದ್ದಿಮೆ ದಾರರು ಹಾಗೂ ವ್ಯಾಪಾರಿಗಳು ನಿಷೇಧಿತ ಪ್ಲಾಸ್ಟಿಕ್‌ಗಳನ್ನು ಉಪಯೋಗಿಸುವುದು ಕಂಡು ಬಂದಲ್ಲಿ ಉದ್ದಿಮೆ ಪರವಾನಿಗೆಯನ್ನು ರದ್ದುಪಡಿಸಿ, ದಂಡ ವಿಧಿಸಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಬೈಂದೂರು: ರೈಲು ಢಿಕ್ಕಿ ರಿಕ್ಷಾ ಚಾಲಕ ಮೃತ್ಯು

ಬೈಂದೂರು, ನ.30: ರೈಲು ಢಿಕ್ಕಿ ಹೊಡೆದ ಪರಿಣಾಮ ರಿಕ್ಷಾ ಚಾಲಕರೊಬ್ಬರು ಮೃತಪಟ್ಟ ಘಟನೆ ಮಂಗಳವಾರ ತಡರಾತ್ರಿ ಬೈಂದೂರು ಗ್ರಾಮದ ವಿದ್ಯಾನಗರ ರೈಲ್ವೆ ಗೇಟ್ ಬಳಿ ನಡೆದಿರುವುದಾಗಿ ವರದಿಯಾಗಿದೆ.

ಮೃತರನ್ನು ಸಂತೋಷ ದೇವಾಡಿಗ ಎಂದು ಗುರುತಿಸಲಾಗಿದೆ.

ಇವರು ಸ್ಕೂಲ್ ಬಸ್ ಚಾಲಕರಾಗಿ ಹಾಗೂ ರಿಕ್ಷಾದಲ್ಲಿ ಬಾಡಿಗೆ ಮಾಡಿಕೊಂಡು ಜೀವನ ನಡೆಸುತ್ತಿದ್ದರು. ರಾತ್ರಿ ಮನೆಯಿಂದ ರಿಕ್ಷಾ ಬಾಡಿಗೆಗಾಗಿ ರೈಲ್ವೇ ಸ್ಟೇಷನ್ ಕಡೆಗೆ ನಡೆದುಕೊಂಡು ಹೋಗುತ್ತಿದ್ದ ಇವರಿಗೆ ರೈಲು ಢಿಕ್ಕಿ ಹೊಡೆಯಿತೆನ್ನಲಾಗಿದೆ. ಪರಿಣಾಮ ಗಂಭೀರ ಗಾಯಗೊಂಡ ಇವರು ಸ್ಥಳದಲ್ಲಿಯೇ ಮೃತಪಟ್ಟರು ಎಂದು ತಿಳಿದು ಬಂದಿದೆ. ಈ ಬಗ್ಗೆ ಬೈಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬ್ರಹ್ಮಾವರ: ಬಸ್ ಢಿಕ್ಕಿ, ಪಾದಚಾರಿ ಮೃತ್ಯು

ಉಡುಪಿ, ನ.30: ಬಸ್ ಢಿಕ್ಕಿ ಹೊಡೆದ ಪರಿಣಾಮ ಪಾದಚಾರಿಯೊಬ್ಬರು ಮೃತಪಟ್ಟ ಘಟನೆ ಬ್ರಹ್ಮಾವರ ಆಕಾಶವಾಣಿ ಬಳಿ ರಾಷ್ಟ್ರೀಯ ಹೆದ್ದಾರಿ 66 ರಲ್ಲಿ ಬುಧವಾರ ರಾತ್ರಿ 9 ಗಂಟೆ ಸುಮಾರಿಗೆ ನಡೆದಿರುವುದು ವರದಿಯಾಗಿದೆ.

ಮೃತರನ್ನು ಹಂದಾಡಿಯ ಇಂದು ಶೇಖರ್ ಎಂದು ಗುರುತಿಸಲಾಗಿದೆ

ಕುಂದಾಪುರದಿಂದ ಉಡುಪಿ ಕಡೆಗೆ ಹೋಗುತ್ತಿದ್ದ ವೇಗದೂತ ಬಸ್ ರಸ್ತೆ ದಾಟುತ್ತಿದ್ದ ಇಂದು ಶೇಖರ್ ಅವರಿಗೆ ಢಿಕ್ಕಿ ಹೊಡೆಯಿತೆನ್ನಕಾಗಿದೆ. ಪರಿಣಾಮ ಗಂಭೀರ ಗಾಯಗೊಂಡ ಅವರು ಸ್ಥಳದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಈ ಬಗ್ಗೆ ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ನಾಳೆ ಪ್ರವಾದಿ ಮುಹಮ್ಮದ್(ಸ.)ರ ಜೀವನ-ಸಂದೇಶ ಅಭಿಯಾನ ಸಮಾರೋಪ

ಮಂಗಳೂರು, ನ.30: ನಗರದ ಎಚ್‌ಐಎಫ್ ಇಂಡಿಯಾ ವತಿಯಿಂದ ಪ್ರವಾದಿ ಮುಹಮ್ಮದ್(ಸ.) ಅವರ ಜೀವನ ಮತ್ತು ಸಂದೇಶ ಅಭಿಯಾನ(ಸೀರತ್ ಕಾರ್ಯಕ್ರಮ)ದ ಸಮಾರೋಪ ಡಿ.2ರಂದು ಸಂಜೆ 6:45ಕ್ಕೆ ನಗರದ ಪುರಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಜೊತೆ ಕಾರ್ಯದರ್ಶಿ ಮುಹಮ್ಮದ್ ರಿಝ್ವಾನ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದರ ಉದ್ಘಾಟನೆ ನ.4ರಂದು ನಡೆದಿದ್ದು, ಅಲ್ಲಿಂದ ನಾನಾ ಧಾರ್ಮಿಕ ಸಭೆ, ರಕ್ತದಾನ, ಯುವಜನತೆಯಲ್ಲಿ ಸೇವಾ ಮನೋಭಾವವನ್ನು ಜಾಗೃತಿ ಮಾಡುವುದು ಸೇರಿದಂತೆ ಪ್ರವಾದಿ ಅವರ ಕುರಿತು ಸರಿಯಾದ ಮಾಹಿತಿಯನ್ನು ಸಮಾಜಕ್ಕೆ ಹಾಗೂ ಇತರ ಸಮುದಾಯದವರಿಗೆ ನೀಡುವ ಕಾರ್ಯವನ್ನು ಮಾಡಲಾಗಿದೆ. ಸಮಾರೋಪದಲ್ಲಿ ಭೋಪಾಲ್‌ನ ಅಲ್‌ಅಸರ್ ಫೌಂಡೇಶನ್ ಅಧ್ಯಕ್ಷ ಅಥರ್ ಖಾನ್ ಭಾಗವಹಿಸಲಿದ್ದಾರೆ ಎಂದರು.

ಸುದ್ದಿ ಗೋಷ್ಠಿಯಲ್ಲಿ ಸಂಸ್ಥೆಯ ಅಧ್ಯಕ್ಷ ನಾಝಿಮ್ ಎ.ಕೆ., ಕಾರ್ಯಕ್ರಮದ ಸಂಚಾಲಕ ಹನೀಫ್ ಪಿ.ಎಸ್., ಸದಸ್ಯ ನಾಝಿಮ್ ಎಸ್.ಎಸ್. ಹಾಗೂ ಫಹಾದ್ ಪಾಂಡೇಶ್ವರ ಉಪಸ್ಥಿತರಿದ್ದರು.

ಮನೆಗೆ ನುಗ್ಗಿ ನಗನಗದು ಕಳವು

ಕಾರ್ಕಳ, ನ.30: ಮನೆಗೆ ನುಗ್ಗಿದ ಕಳ್ಳರು ಲಕ್ಷಾಂತರ ರೂ. ಮೌಲ್ಯದ ನಗ-ನಗದು ಕಳವುಗೈದ ಘಟನೆ 76-ಬಡಗುಬೆಟ್ಟು ಗ್ರಾಮದ ಬೈಲೂರು ಬಿಎಂಎಂ ಶಾಲೆ ರಸ್ತೆಯಲ್ಲಿ ಮಂಗಳವಾರ ಮಧ್ಯಾಹ್ನ ನಡೆದಿರುವುದಾಗಿ ವರದಿಯಾಗಿದೆ.

ಶಶಿಧರ್ ಕೆ. ಅಮೀನ್ ಎಂಬವರ ಮನೆಯ ಹಿಂಬಾಲಿನ ಮೂಲಕ ನುಗ್ಗಿದ ಕಳ್ಳರು, ಕಪಾಟಿನಲ್ಲಿದ್ದ 2 ಚಿನ್ನದ ಚೈನ್, ಒಂದು ಜೊತೆ ಬೆಂಡೋಲೆ, 2 ಬ್ರೆಸ್ಲೈಟ್, 2 ಉಂಗುರ ಹಾಗೂ 11,000 ರೂ. ನಗದು ಕಳವು ಮಾಡಿಕೊಂಡು ಹೋಗಿದ್ದಾರೆ. ಇವುಗಳ ಒಟ್ಟು ಮೌಲ್ಯ 2,31,000 ರೂ. ಎಂದು ಅಂದಾಜಿಸಲಾಗಿದೆ.

ಈ ಬಗ್ಗೆ ಕಾರ್ಕಳ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಿ.3: ಮಂಗಳೂರಿನಲ್ಲಿ ಮುಸ್ಲಿಮ್ ಐಕ್ಯ ಸಂದೇಶ ಕಾರ್ಯಕ್ರಮ

ಮಂಗಳೂರು, ನ.30: ದ.ಕ. ಜಿಲ್ಲಾ ಮುಸ್ಲಿಮ್ ಜಸ್ಟೀಸ್ ಫೋರಂ (ಎಂಜೆಎಫ್) ವತಿಯಿಂದ ಮುಸ್ಲಿಮ್ ಐಕ್ಯ ಸಂದೇಶ ಕಾರ್ಯಕ್ರಮವು ಡಿ.3ರಂದು ಸಂಜೆ 4ಕ್ಕೆ ನಗರದ ಕಂಕನಾಡಿಯ ಜಂ-ಇಯ್ಯತುಲ್ ಫಲಾಹ್ ಸಭಾಂಗಣದ ಮಹ್ರೂಂ ಅಮೀರ್ ತುಂಬೆ ವೇದಿಕೆಯಲ್ಲಿ ನಡೆಯಲಿದೆ ಎಂದು ಎಂಜೆಎಫ್ ಸ್ಥಾಪಕಾಧ್ಯಕ್ಷ ರಫೀಉದ್ದೀನ್ ಕುದ್ರೋಳಿ ತಿಳಿಸಿದ್ದಾರೆ.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲವು ಪ್ರಕರಣಗಳಿಗೆ ಸಂಬಂಧಿಸಿದಂತೆ ಮುಸ್ಲಿಮ್ ಸಮುದಾಯದ ಮೇಲೆ ಕಪೋಲಕಲ್ಪಿತ ಆರೋಪ ಹೊರಿಸಿ ಅದೇ ಅಂತಿಮ ಎಂಬಂತೆ ತೀರ್ಮಾನಕ್ಕೆ ಬರುವ ಪ್ರಯತ್ನಗಳು ನಡೆಯುತ್ತಿದೆ. ಈ ಬಗ್ಗೆ ಸಮುದಾಯದ ಹೊಣೆಗಾರಿಕೆಯ ಬಗ್ಗೆ ಚರ್ಚಿಸಲು ಮತ್ತು ಏಕಪಕ್ಷೀಯ ತೀರ್ಮಾನಗಳ ವಿರುದ್ಧ ಕಾನೂನು ಕ್ರಮಕೈಗೊಳ್ಳುವ ಕುರಿತು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಮುಸ್ಲಿಮ್ ಸಮುದಾಯ ಎದುರಿಸುವ ಸಮಸ್ಯೆಗಳ ಪರಿಹಾರಕ್ಕಾಗಿ ರಚನಾತ್ಮಕ ಮತ್ತು ಸಂಘಟನಾತ್ಮಕ ಪ್ರಯತ್ನ ಮಾಡುತ್ತಿವೆ. ಆ ಹಿನ್ನೆ